# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಚಂದ್ರಹಾಸ, ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ, ಮಂಡ್ಯ ಜಿಲ್ಲೆ ಇವರನ್ನು ಮಾನ್ಯ ಉಚ್ಚ ನ್ಯಾಯಾಯದ ಆದೇಶದಂತೆ ಕೆಸ್ತೂರು ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಪತ್ರ ಸಂಖ್ಯೆ: ಜಿ.ಪಂಮಂ:ತಾಪಂಮ:ಮಗ್ರಾಪಂ:ಪ್ರಕರಣ:01/2016-17 ದಿನಾಂಕ: 03.06.2016.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ:499:ಗ್ರಾಪಂಅ:2016, ದಿನಾಂಕ:15.06.2016ರ ಕಾರಣ ಕೇಳುವ ನೋಟಿಸ್.
3. ಶ್ರೀ ಚಂದ್ರಹಾಸ, ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ, ಇವರು ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:24.06.2016.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ: 499 ಗ್ರಾಪಂಅ: 2016, ದಿನಾಂಕ: 05.08.2016.
5. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಆದೇಶ: ರಿಟ್ ಅರ್ಜಿ ಸಂಖ್ಯೆ: 48963/2016, ದಿನಾಂಕ: 04.04.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಶ್ರೀ ಚಂದ್ರಹಾಸ, ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ, ಮಂಡ್ಯ ಜಿಲ್ಲೆ, ಇವರು ಕೆಸ್ತೂರು ಗ್ರಾಮ ಪಂಚಾಯಿತಿಯ ಮಹಿಳಾ ಗ್ರೂಪ್ ಡಿ ನೌಕರರೊಡನೆ ಅನುಚಿತವಾಗಿ ವರ್ತಿಸಿ ಲೈಗಿಕ ಕಿರುಕುಳ ನೀಡಿ ಅತ್ಯಾಚಾರ ಎಸಗಲು ಪ್ರಯತ್ನಿಸಿರುವುದರಿಂದ ಸದರಿ ನೌಕರಳು ಕೆಸ್ತೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿರುವುದಾಗಿ, ಮದ್ದೂರು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯವರ ವರದಿ ಮತ್ತು ಆರೋಪಿತ ಅಧ್ಯಕ್ಷರ ವಿರುದ್ಧ FIR ದಾಖಲಿಸಿರುವುದನ್ನು ಹಾಗೂ ಗ್ರಾಮ ಪಂಚಾಯತಿಯಲ್ಲಿ ಅಳವಡಿಸಿದ್ದ CCTV ಕ್ಯಾಮರಾದಲ್ಲಿ ಸೆರೆಯಾಗಿರುವ ದೃಶ್ಯಾವಳಿ ಸಿ.ಡಿ.ಯನ್ನು ಲಗತ್ತಿಸಿ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರೀತ್ಯ ಕ್ರಮವಹಿಸುವಂತೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43-ಎ ರಡಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸನ್ನು ದಿನಾಂಕ: 15.06.2016 ರಂದು ಜಾರಿ ಮಾಡಲಾಗಿತ್ತು. ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಸದರಿಯವರು ಕಾರಣ ಕೇಳುವ ನೋಟೀಸಿಗೆ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಆರ್.ಚಂದ್ರಹಾಸ ಹಿಂದಿನ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ, ಇವರನ್ನು ದುರ್ನಡತೆಯ ಆಪಾದನೆಯ ಮೇಲೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/499/ಗ್ರಾಪಂಅ/2016, ದಿನಾಂಕ: 05.08.2016 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ)ರನ್ವಯ ಅಧ್ಯಕ್ಷ ಪದವಿಯಿಂದ ವಜಾಗೊಳಿಸಿದ್ದರ ವಿರುದ್ಧ ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಅರ್ಜಿದಾರರು ಮಾನ್ಯ ರಾಜ್ಯ ಉಚ್ಚ ನ್ಯಾಯಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 48963/2016ನ್ನು ದಾಖಲಿಸಿದ್ದು, ರಾಜ್ಯ ಉಚ್ಚ ನ್ಯಾಯಾಲಯವು ಈ ವಿಷಯದಲ್ಲಿ ವಿಚಾರಣೆ ನಡೆಸಿ, ಸದರಿ ಪ್ರಕರಣದಲ್ಲಿ 2ನೇ ಪ್ರತಿವಾದಿಯಾದ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇವರು ಈ ಹಿಂದೆ ದುರ್ನಡತೆಗಾಗಿ ಶ್ರೀ ಆರ್.ಚಂದ್ರಹಾಸ ಹಿಂದಿನ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಿ, ಅವರಿಂದ ಉತ್ತರ ಪಡೆದ ನಂತರ ಉತ್ತರವನ್ನು ಪರಿಶೀಲಿಸಿ ವಿಚಾರಣೆಯನ್ನು ನಡೆಸದೆ ಅಧ್ಯಕ್ಷ ಸ್ಥಾನದಿಂದ ವಜಾಮಾಡಿರುವುದನ್ನು ಪರಿಗಣಿಸಿರುತ್ತದೆ. ಆದ್ದರಿಂದ ಸದರಿ ಪ್ರಕರಣದಲ್ಲಿ ವಿಚಾರಣೆಯನ್ನು ಮುಂದುವರೆಸಲು ತನ್ನ ತೀರ್ಪಿನಲ್ಲಿ ಅವಕಾಶ ಕಲ್ಪಿಸಿರುತ್ತದೆ. ಹಾಗೂ ನ್ಯಾಯಾಲಯದ ಆದೇಶದಂತೆ ಶ್ರೀ ಆರ್.ಚಂದ್ರಹಾಸ ಹಿಂದಿನ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ ಇವರನ್ನು ಅಧ್ಯಕ್ಷ ಸ್ಥಾನಕ್ಕೆ ಪುನರ್ ನೇಮಿಸಲು ಆದೇಶಿಸಿರುತ್ತದೆ.

ಸರ್ಕಾರವು ಶ್ರೀ ಆರ್.ಚಂದ್ರಹಾಸ ಹಿಂದಿನ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರನ್ನು ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 48963/2019, ದಿನಾಂಕ: 04.04.2019ರಲ್ಲಿ ಆದೇಶಿಸಿರುವಂತೆ ಕೆಸ್ತೂರು ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನಕ್ಕೆ ಪುನರ್ ನೇಮಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 124 ಗ್ರಾಪಂನ್ಯಾ 2016,</u>**
**<u>ಬೆಂಗಳೂರು, ದಿನಾಂಕ: 29.05.2019.</u>**

ಮೇಲ್ಕಂಡ ಪ್ರಸ್ತಾವನೆಗಳಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಆರ್.ಚಂದ್ರಹಾಸ ಹಿಂದಿನ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರನ್ನು ಕೆಸ್ತೂರು ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನಕ್ಕೆ ಪುನರ್ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಮಂಡ್ಯ ಜಿಲ್ಲಾ ಪಂಚಾಯಿತಿ, ಮಂಡ್ಯ ಜಿಲ್ಲೆ.
2) ಕಾರ್ಯನಿರ್ವಾಹಕಾಧಿಕಾರಿ, ಮದ್ದೂರು ತಾಲ್ಲೂಕು ಪಂಚಾಯಿತಿ, ಮಂಡ್ಯ ಜಿಲ್ಲೆ.
3) ಆರ್.ಚಂದ್ರಹಾಸ ಹಿಂದಿನ ಅಧ್ಯಕ್ಷರು, ಕೆಸ್ತೂರು ಗ್ರಾಮ ಪಂಚಾಯತಿ, ಮದ್ದೂರು ತಾಲ್ಲೂಕು ಪಂಚಾಯಿತಿ, ಮಂಡ್ಯ ಜಿಲ್ಲೆ.
4) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೆಸ್ತೂರು ಗ್ರಾಮ ಪಂಚಾಯಿತಿ, ಮದ್ದೂರು ತಾಲ್ಲೂಕು ಪಂಚಾಯಿತಿ, ಮಂಡ್ಯ ಜಿಲ್ಲೆ.
5) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.